# ಅರ್ಜಿ ಸಲ್ಲಿಕೆಯ ಅವಧಿ ವಿಸ್ತರಣೆ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಕೃಷಿಕ್ ಸರ್ವೋದಯ ಫೌಂಡೇಷನ್ 2022–23ನೇ ಸಾಲಿನ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸುವ ಅವಧಿಯನ್ನು ಡಿ. 31ರವರೆಗೆ ವಿಸ್ತರಿಸಿದೆ.

ಪಿಯುಸಿ, ಪದವಿ, ವೃತ್ತಿಪರ, ಸ್ನಾತಕೋತ್ತರ ಪದವಿಯಲ್ಲಿ ಶೇ 80ರಷ್ಟು ಅಂಕಗಳಿಸಿ, ವಿದ್ಯಾಭ್ಯಾಸ ಮುಂದುವರಿಸಲು ಬಯಸುವ, ಆರ್ಥಿಕವಾಗಿ ಹಿಂದುಳಿದ ಗ್ರಾಮೀಣ ಪ್ರದೇಶದ ಅರ್ಹ ಬಡ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲಾಗುತ್ತದೆ.

ಅರ್ಹರು www.ksfkarnataka.com ವೆಬ್‌ಸೈಟ್ ಮೂಲಕ ಅರ್ಜಿ ಪಡೆದು, ಕೃಷಿಕ್ ಸರ್ವೋದಯ ಫೌಂಡೇಷನ್, ನಂ.15, 2ನೇ ಹಂತ, ಗಾಲ್ಫ್ ಅವೆನ್ಯೂ ರಸ್ತೆ, ಹಳೆಯ ವಿಮಾನ ನಿಲ್ದಾಣ ರಸ್ತೆ, ಕೋಡಿಹಳ್ಳಿ, ಬೆಂಗಳೂರು- 560008 ಈ ವಿಳಾಸಕ್ಕೆ ಸಲ್ಲಿಸಬಹುದು.

ಮಾಹಿತಿಗೆ ದೂರವಾಣಿ 080-25202299, ಮೊ 9481903019ಕ್ಕೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.